**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1088/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಸಿದ್ದಯ್ಯ** | ಪ್ರಾಸಾಃ 5 |
| ತಂದೆಯ/ಗಂಡನ ಹೆಸರು | | ಬೋರಯ್ಯ | ಚಾಸಾಃ 5 |
| ವಯಸ್ಸು | | 69 ವರ್ಷ | |
| ಕೆಲಸ | | ಸೆಕ್ಯುರಿಟಿ ಗಾರ್ಡ್ | ಸಾ ಪ್ರ ಬೋ |
| ವಾಸ | | ಕಳಲೆ ಗ್ರಾಮ | ದಿಃ 16/04/2024 |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದಃ**

ಆರೋಪಿತರು ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಆರೋಪಿತರು ಅಪರಾಧವನ್ನು ಎಸಗುವ ದೃಷ್ಟಿಯಿಂದ ಅಕ್ರಮ ಗುಂಪು ಕಟ್ಟಿಕೊಂಡಿಲ್ಲ, ಸರ್ಕಾರಿ ಕೆಲಸಕ್ಕೆ ಅಡ್ಡಿ ಪಡಿಸಿಲ್ಲ, ಚಾಸಾ-1 ರವರಿಗೆ ಯಾವುದೇ ಹಲ್ಲೆ ಮಾಡಿಲ್ಲ, ಆರೋಪಿತರು ಅಕ್ರಮವಾಗಿ ಚಾಸಾ-8 ರಿಂದ 11 ರವರನ್ನು ಲಾರಿಯಲ್ಲಿ ಕೂಡಿ ಹಾಕಿಲ್ಲ ಮತ್ತು ಕೊಲೆ ಬೆದರಿಕೆ ಹಾಕಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ ಮತ್ತು ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎ.ಪಿ.ಪಿ.ಯವರಿಂದಃ**

ನಾನು ಬಣ್ಣಾರಿ ಅಮ್ಮನ್ ಶುಗರ್ ಫ್ಯಾಕ್ಟರಿಯಲ್ಲಿ ಸೆಕ್ಯುರಿಟಿ ಗಾರ್ಡ್ ಆಗಿ ಕೆಲಸ ಮಾಡುವಾಗ ದಿನಾಂಕ 29.06.2014 ರಂದು 1 ರಿಂದ 22 ನೇ ಆರೋಪಿತರು ಆಡಳಿತಾತ್ಮಕ ವಿಚಾರಕ್ಕೆ ಸಂಬಂಧಿಸಿ ಆಡಳಿತ ಮಂಡಳಿಯ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಧರಣಿ ನಡೆಸುತ್ತಿದ್ದರು ಎಂದರೆ ಸರಿಯಲ್ಲ. ದಿನಾಂಕ 29.06.2014 ರಂದು 3 ಗಂಟೆ ಸಮಯಕ್ಕೆ ಆರೋಪಿತರುಗಳು ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗಳಿಗೆ ಮತ್ತು ಸೆಕ್ಯೂರಿಟಿ ಸಿಬ್ಬಂದಿಗಳ ಕರ್ತವ್ಯಕ್ಕೆ ಅಡ್ಡಿ ಪಡಿಸಿ ಅವಾಚ್ಯ ಶಬ್ದಗಳಿವಿಂದ ಬೈದು ಕಾರ್ಖನೆಯಲ್ಲಿ ಹಣ ಪಡೆದು ಅವರಿಗೆ ಬೆಂಬಲ ನೀಡುತ್ತಿದ್ದೀರಾ ಎಂದು ಬೈದು ಕರ್ತವ್ಯ ನಿರತ

ಸಿಬ್ಬಂದಿಗಳನ್ನು ಮತ್ತು ಲಾರಿಗಳನ್ನು ಸುಟ್ಟು ಹಾಕಿ ಕೊಲೆ ಮಾಡುವುದಾಗಿ ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಪೊಲೀಸ್ ಸಿಬ್ಬಂದಿಗಳನ್ನು ಅಡ್ಡಗಟ್ಟಿ ಕೈಗಳಿಂದ ತಳ್ಳಾಡಿ ಅವರ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಲಾರಿ ಚಾಲಕರುಗಳಿಗೆ ಆರೋಪಿತರು ಕೈಗಳಿಂದ ಹೊಡೆದು ವಾಪಸ್ಸು ಹೋಗುವಂತೆ ಒತ್ತಾಯಿಸುತ್ತಿದ್ದರು ಎಂದರೆ ಸರಿಯಲ್ಲ. ನನಗೂ ಕೂಡ ಆರೋಪಿತರುಗಳು ಕೈಗಳಿಂದ ಹೊಡೆದು ಎಳೆದಾಡಿರುತ್ತಾರೆ ಎಂದರೆ ಸರಿಯಲ್ಲ. ಇದೇ ವಿಚಾರವಾಗಿ ದಿನಾಂಕ 30.06.2014 ರಂದು ಈಗ ನನಗೆ ಓದಿ ಹೇಳಿದಂತೆ " ದಿನಾಂಕ 29.06.2014 ರಂದು -------- ನೋಡಿದರೆ ಗುರುತಿಸುತ್ತೇನೆ" ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-6 ಎಂದು ಗುರುತಿಸಲಾಯಿತು. ಆರೋಪಿತರು ನಮ್ಮ ಕಾರ್ಖಾನೆಯಲ್ಲಿಯೇ ಕೆಲಸ ಮಾಡುತ್ತಿದ್ದಾರೆ ಎಂದರೆ ಸರಿ. ಆದ್ದರಿಂದ ಈ ಮೇಲಿನ ಎಲ್ಲಾ ವಿಚಾರಗಳು ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು:** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**